## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ ತಾಲ್ಲೂಕಿನ ಮೈಲಪ್ಪನಹಳ್ಳಿ ಮತ್ತು ಇತರೆ 4 ಮಾರ್ಗಮಧ್ಯದ ಗ್ರಾಮಗಳಿಗೆ ಕುಡಿಯುವ ನೀರು ಸರಬರಾಜು ಮಾಡುವ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. ದಿನಾಂಕ:03.08.2020ರಂದು ನಡೆದ SLSSC ಸಭೆಯ ನಡವಳಿಗಳು.
2. ಮುಖ್ಯ ಇಂಜಿನಿಯರ್, RDWSD, ರವರ ಕಡತ ಸಂ:ಗ್ರಾಕುನೀ&ನೈಇ/303/ಮುಇಂ/ತಾಂತ್ರಿಕ/2020.

--

**ಪೀಠಿಕೆ:**

ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ ತಾಲ್ಲೂಕಿನ ಮೈಲಪ್ಪನಹಳ್ಳಿ ಮತ್ತು ಇತರೆ 4 ಮಾರ್ಗಮಧ್ಯದ ಗ್ರಾಮಗಳಿಗೆ ಜಕ್ಕಲಮಡಗು ಜಲಾಶಯದಿಂದ ಕುಡಿಯುವ ನೀರು ಪೂರೈಸುವ ಯೋಜನೆಯ ಅಂದಾಜು ಮೊತ್ತ ರೂ.415.20ಲಕ್ಷಗಳಿಗೆ ದಿನಾಂಕ:03.08.2020ರಂದು ನಡೆದ SLSSC ಸಭೆಯಲ್ಲಿ ತಾತ್ವಿಕ ಅನುಮೋದನೆ ನೀಡಲಾಗಿದೆ. ಮೇಲೆ (2)ರಲ್ಲಿ ಓದಲಾದ ಪ್ರಸ್ತಾವನೆಯಲ್ಲಿ CE,RDWSD ರವರು ಈ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಲು ಕೋರಿರುತ್ತಾರೆ. ನಿಯಮಾನುಸಾರ ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತಿ ಹಾಗೂ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರು ಮುಂದಿನ ಪ್ರಕ್ರಿಯೆ ಅನುಸರಿಸಲನುವಾಗುವಂತೆ 2020-21ನೇ ಸಾಲಿನ ಜಲ ಜೀವನ್ ಮಿಷನ್(**JJM**) – (**Bulk Water Supply of New MVS**) ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ:-

**ಸರ್ಕಾರದ ಆದೇಶ ಸಂಖ್ಯೆ:ಗ್ರಾಕುನೀ&ನೈಇ 82 ಗ್ರಾನೀಸ(4)2020 ಬೆಂಗಳೂರು, ದಿನಾಂಕ:27.11.2020.**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ ತಾಲ್ಲೂಕಿನ ಮೈಲಪ್ಪನಹಳ್ಳಿ ಮತ್ತು ಇತರೆ 4 ಮಾರ್ಗಮಧ್ಯದ ಗ್ರಾಮಗಳಿಗೆ ಕುಡಿಯುವ ನೀರು ಪೂರೈಸುವ ಯೋಜನೆಯ **ರೂ.415.20ಲಕ್ಷ (ನಾಲ್ಕು ನೂರ ಹದಿನೈದು ಲಕ್ಷದ ಇಪ್ಪತ್ತು ಸಾವಿರ ರೂಪಾಯಿಗಳು ಮಾತ್ರ)**ಗಳನ್ನು ಜಲ ಜೀವನ್ ಮಿಷನ್(**JJM**)ಯಡಿ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. **ಈ ಆದೇಶವು ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ.**

(ಅ) ಅನುಮೋದಿತ ಕುಡಿಯುವ ನೀರಿನ ಕಾರ್ಯಕ್ರಮದ ವ್ಯಾಪ್ತಿಗೆ ಬರುವ ಗ್ರಾಮ / ಜನವಸತಿಗಳು ಮತ್ತ್ಯಾವುದೇ ಯೋಜನೆಗಳಡಿ ಸೇರ್ಪಡೆಯಾಗಿರಬಾರದು.

(ಆ) ಗುತ್ತಿಗೆದಾರರು ಕಾಮಗಾರಿಗಳನ್ನು ಉತ್ತಮ ಗುಣಮಟ್ಟದಲ್ಲಿ ಮತ್ತು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು.

(ಇ) ಈ ಆದೇಶದಡಿ ಅನುಮೋದನೆಯಾದ ಯೋಜನೆಗೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ CE/RDWSD ದೃಡೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಪ್ರಗತಿ ಆಧರಿಸಿ ಅನುದಾನ ಬಿಡುಗಡೆಯಾಗಲಿದೆ. 2020-21ರ ಸಾಲಿನಲ್ಲಿ MISನಡಿ ಒದಗಿಸಿರುವ ಅನುದಾನದ ವತಿಯಿಂದ ಯೋಜನೆಯನ್ನು ಅನುಷ್ಠಾನಗೊಳಿಸಬೇಕು.

(ಈ) ಯೋಜನಾ ಅನುಷ್ಠಾನವನ್ನು ಚಾಲ್ತಿ ಪಾರದರ್ಶಕ (KTPP ಕಾಯಿದೆಯನ್ವಯ) ನೀತಿಯನ್ವಯವೇ ಮಾಡತಕ್ಕದ್ದು ಮತ್ತು ಯೋಜನೆಯ ಅನುಷ್ಠಾನವನ್ನು ಕಡ್ಡಾಯವಾಗಿ ಸರ್ಕಾರದಿಂದ ಅನುಮೋದನೆಯಾಗಿರುವ ಸಂಸ್ಥೆ ಮೂಲಕ 3rd Party Inspectionಗೆ ಒಳಪಡಿಸುವುದು.

(ಉ) ಈ ಯೋಜನೆಗೆ ತಗಲುವ ಅನುಮೋದಿತ ಅಂದಾಜು ವೆಚ್ಚದ ವ್ಯಾಪ್ತಿಯೊಳಗೆ ಗುತ್ತಿಗೆ ನೀಡಿದ 12 ತಿಂಗಳೊಳಗಾಗಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿ ಯೋಜನೆಯನ್ನು ಕಾರ್ಯಗತಗೊಳಿಸತಕ್ಕದ್ದು. ಈಗ ಅನುಮೋದನೆಯಾದ ಕ್ರಿಯಾ ಯೋಜನೆಯ ಅಂದಾಜು ವೆಚ್ಚದಲ್ಲಿ ಹೆಚ್ಚಳವಾಗದಂತೆ ಎಲ್ಲಾ ಆಡಳಿತಾತ್ಮಕ ಹಾಗೂ ತಾಂತ್ರಿಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

(ಊ) Bulk Water meter ಹಾಗೂ House hold metering ವ್ಯವಸ್ಥೆಯನ್ನು MVS ಯೋಜನೆಗಳಿರುವೆಡೆ ಕಡ್ಡಾಯವಾಗಿ ಮಾಡಬೇಕು. ಆಯಾ ಗ್ರಾಮ ಪಂಚಾಯತಿ ಸದರಿ ಆಧಾರದ ಮೇಲೆ ಹೊರಗುತ್ತಿಗೆ ಸಂಸ್ಥೆಗೆ/ಸರ್ಕಾರಕ್ಕೆ ನೀರು ಬಳಕೆ ಆಧಾರದ ಮೇಲೆ ನೀರಿನ ಕರ ಪಾವತಿಸಬೇಕು.

(ಋ) ಗ್ರಾಮಗಳ ಆಂತರಿಕ ಸರಬರಾಜು ವ್ಯವಸ್ಥೆಯನ್ನು ಸ್ಥಳೀಯ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ (VWSSC) / ಸಂಬಂಧಿಸಿದ ಗ್ರಾಮ ಪಂಚಾಯತ್ / ಪಾರದರ್ಶಕ ನೀತಿಯನ್ವಯ ಆಯ್ಕೆ ಮಾಡಿದ ಸರ್ಕಾರೇತರ ಸಂಸ್ಥೆ / ಸಂಬಂಧಪಟ್ಟ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಮುಖೇನ ನಡೆಸಲು ಗ್ರಾಮ ಪಂಚಾಯತ್ ಠರಾವು ಆಧರಿಸಿ ಸೂಕ್ತ ವ್ಯವಸ್ಥೆ ಮಾಡತಕ್ಕದ್ದು.

ಎ) ಸರ್ಕಾರದ ನೀತಿಯನ್ವಯ ಮನೆ ಸಂಪರ್ಕ ಮತ್ತು ಸ್ಟ್ಯಾಂಡ್ ಪೋಸ್ಟ್‌ಗಳಿಗೆ ಕಲ್ಪಿಸಿರುವ ಸಂಪರ್ಕದನ್ವಯ ನಿರ್ವಹಣೆ ವೆಚ್ಚಕ್ಕನುಗುಣವಾಗಿ ಅಗತ್ಯ ನೀರಿನ ಶುಲ್ಕ ಸಂಗ್ರಹಿಸತಕ್ಕದ್ದು ಹಾಗೂ ಮನೆ ಸಂಪರ್ಕಕ್ಕೆ ನೀರಿನ ಠೇವಣಿಯನ್ನು ಗ್ರಾಮ ಪಂಚಾಯತ್ ಠರಾವಿನನ್ವಯ ಸಂಗ್ರಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಸರ್ಕಾರದ ಉಪ ಕಾರ್ಯದರ್ಶಿ(ಆಡಳಿತ)(ಪ್ರ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು– II – E&RSA-) ಕರ್ನಾಟಕ, ಬೆಂಗಳೂರು.
4. ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಮೈಸೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಆಯುಕ್ತರು, RDW&SD, ಕಾವೇರಿ ಭವನ, ಬೆಂಗಳೂರು.
9. ಮುಖ್ಯ ಇಂಜಿನಿಯರ್, ಗ್ರಾ.ಕು.ನೀ.&.ನೈ. ಇಲಾಖೆ, 1ನೇ ಮಹಡಿ, ಕೆ.ಹೆಚ್.ಬಿ. ಕಟ್ಟಡ, ಕಾವೇರಿಭವನ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
10. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು
11. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ.
12. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ ಕಚೇರಿ, ಬೆಂಗಳೂರು.

13. ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
14. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾ.ಅ.ಪಂ.ರಾಜ್ ಇಲಾಖೆ, ಬೆಂಗಳೂರು.
15. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&ನೈ.ಇ., ಕಾವೇರಿ ಭವನ, ಬೆಂಗಳೂರು.
16. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ಚಿಕ್ಕಬಳ್ಳಾಪುರ**
17. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.&.ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
18. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
19. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
20. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.